# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೇಮಾವತಿ ಯೋಜನೆ ತುಮಕೂರು ಶಾಖಾ ನಾಲೆ ಕಿ.ಮೀ 105.725 ರಿಂದ ಗುರುತ್ವಾಕರ್ಷಣ ಕೊಳವೆಗಳ ಮೂಲಕ ತುಮಕೂರು ಜಿಲ್ಲೆಯ ಗುಬ್ಬಿ ಮತ್ತು ಶಿರಾ ತಾಲ್ಲೂಕಿನ 42 ಗ್ರಾಮಗಳ ಕುಡಿಯುವ ನೀರಿನ ಬೇಡಿಕೆಯನ್ನು ಹಾಗಲವಾಡಿ ಹೋಬಳಿ ಮಂಚಲದೊರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಠದಹಳ್ಳ ಮತ್ತು ಇತರೆ ಕೆರೆಗಳಿಗೆ ನೀರೊದಗಿಸುವ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

*ಓದಲಾಗಿದೆ :-*

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-5/ತುಮಕೂರು-523/2018-19/3496, ದಿನಾಂಕ:16-01-2019 ಮತ್ತು 17-01-2019.

*ಪ್ರಸ್ತಾವನೆ :-*

ಮೇಲೆ ಓದಲಾದ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು ಹಾಗಲವಾಡಿ, ಚೇಳೂರು ಹಾಗೂ ಶಿರಾ ತಾಲ್ಲೂಕು ಬುಕ್ಕಾಪಟ್ಟಣ ಹೋಬಳಿ ಮತ್ತು ಸುತ್ತ ಮುತ್ತಲ ಗ್ರಾಮಸ್ಥರು ತಮ್ಮ ಪ್ರದೇಶದಲ್ಲಿ ಅಂತರ್ಜಲ ಮಟ್ಟ ಕುಸಿದು ಸುಮಾರು 1000 ಅಡಿಗಳಷ್ಟು ಕೊಳವೆಬಾವಿ ಕೊರೆದರೂ ಸಹ ನೀರು ಸಿಗದೆ ಕುಡಿಯುವ ನೀರಿಗಾಗಿ ತೊಂದರೆಯಾಗಿದೆ ಹಾಗೂ ಬೋರ್‌ವೆಲ್‌ಗಳಲ್ಲಿ ಸಿಗುವ ಅಲ್ಪ ಸ್ವಲ್ಪ ನೀರೂ ಸಹ ಪ್ಲೋರೈಡ್ ಯುಕ್ತವಾಗಿ ಕಲುಷಿತವಾಗಿದ್ದು, ಜನ ಜಾನುವಾರುಗಳಿಗೆ ರೋಗ ರುಜಿನಗಳು ಕಾಡುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು, ಹೇಮಾವತಿ ನಾಲೆಯಿಂದ ಕುಡಿಯುವ ನೀರಿಗಾಗಿ ಕೆರೆ ಕಟ್ಟೆಗಳಿಗೆ ನೀರು ಹರಿಸಿ ಬರಗಾಲದ ಬವಣೆಯನ್ನು ನೀಗಿಸಲು ಉದ್ದೇಶಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ. ಅಲ್ಲದೇ, ಹಾಗಲವಾಡಿ ಹೋಬಳಿ ಬರಗಾಲ ಪೀಡಿತ ಪ್ರದೇಶವಾಗಿದ್ದು, ಅಂತರ್ಜಲ ಕುಸಿದು ಬ್ಲಾಕ್ ಬೆಲ್ಟ್ ಎಂದು ಸರ್ಕಾರ 20 ವರ್ಷದಿಂದಲೂ ಘೋಷಿಸಿದೆ ಎಂದು ಪ್ರಸ್ತಾಪಿಸಿರುತ್ತಾರೆ.

2. ಈ ಭಾಗದಲ್ಲಿ ಸಾಕಷ್ಟು ಮಳೆ ಬೀಳದೆ ಕೆರೆ ಕಟ್ಟೆಗಳಲ್ಲಿ ನೀರಿಲ್ಲದಾಗಿ ಜನ ಜಾನುವಾರುಗಳಿಗೆ ಕುಡಿಯುವ ನೀರು ಸಿಗುವುದು ದುರ್ಲಬವಾಗಿದೆ. ಆದ್ದರಿಂದ, ಕುಡಿಯುವ ನೀರಿನ ಸೌಕರ್ಯಕ್ಕಾಗಿ ಹಾಗಲವಾಡಿ ಕೆರೆ ಮತ್ತು ಹೋಬಳಿಯ ಇತರೆ ಕೆರೆಗಳಿಗೆ ನೀರನ್ನು ಒದಗಿಸಲು ಸ್ಥಳೀಯ ಜನ ಪ್ರತಿನಿಧಿಗಳು ಕೋರಿರುತ್ತಾರೆ. ಆದುದರಿಂದ, ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೋಕಿನ 3 ಕೆರೆಗಳಿಗೆ ನೀರನ್ನು ಪೂರೈಸಲು ಉದ್ದೇಶಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ.

3. ಆದುದರಿಂದ, ಗುಬ್ಬಿ ಹಾಗೂ ಶಿರಾ ತಾಲ್ಲೂಕಿನ 6 ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ 42 ಗ್ರಾಮಗಳಿಗೆ ನೀರೊದಗಿಸಲು ಹೇಮಾವತಿ ಯೋಜನೆ ತುಮಕೂರು ಶಾಖಾ ನಾಲೆ ಕಿ.ಮೀ 105.725 ರಿಂದ ಗುರುತ್ವಾಕರ್ಷಣ ಕೊಳವೆಗಳ ಮೂಲಕ 15.29 ಕ್ಯೂಸೆಕ್ಸ್ (64.48 ಎಂ.ಸಿ.ಎಫ್‌ಟಿ) ನೀರನ್ನು ದಿನದ 24 ಗಂಟೆಗಳಂತೆ 49 ದಿನಗಳ ಅವಧಿಯಲ್ಲಿ ಮಠದಹಳ್ಳ ಮತ್ತು ಇತರೆ ಕೆರೆಗಳಿಗೆ ನೀರನ್ನು ಪೂರೈಸಲು ಉದ್ದೇಶಿಸಿದೆ. ಸದರಿ ಪ್ರಸ್ತಾವನೆಯು ದಿನಾಂಕ:10-01-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ 66ನೇ ಮಂಡಳಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

4. ಈ ಹಿನ್ನೆಲೆಯಲ್ಲಿ, ಹೇಮಾವತಿ ಯೋಜನೆ ತುಮಕೂರು ಶಾಖಾ ನಾಲೆ ಕಿ.ಮೀ 105.725 ರಿಂದ ಗುರುತ್ವಾಕರ್ಷಣ ಕೊಳವೆಗಳ ಮೂಲಕ ತುಮಕೂರು ಜಿಲ್ಲೆ ಗುಬ್ಬಿ ಮತ್ತು ಶಿರಾ ತಾಲ್ಲೂಕಿನ 42 ಗ್ರಾಮಗಳ ಕುಡಿಯುವ ನೀರಿನ ಬೇಡಿಕೆಯನ್ನು ಹಾಗಲವಾಡಿ ಹೋಬಳಿ ಮಂಚಲದೊರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಠದಹಳ್ಳ ಮತ್ತು ಇತರೆ ಕೆರೆಗಳಿಗೆ ನೀರು ಪೂರೈಸುವ ಯೋಜನೆಯ

ರೂ.25.65 ಕೋಟಿಗಳ ಮೊತ್ತದ ಡಿ.ಪಿ.ಆರ್ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 43 ಎನ್‌ಹೆಚ್‌ಪಿ 2018,**
**ಬೆಂಗಳೂರು, ದಿನಾಂಕ : 08-03-2019**

ಹೇಮಾವತಿ ಯೋಜನೆ ತುಮಕೂರು ಶಾಖಾ ನಾಲೆ ಕಿ.ಮೀ 105.725 ರಿಂದ 64.48 ಎಂ.ಸಿ.ಎಫ್.ಟಿ. ನೀರನ್ನು ಗುರುತ್ವಾಕರ್ಷಣ ಕೊಳವೆಗಳ ಮೂಲಕ ತುಮಕೂರು ಜಿಲ್ಲೆ ಗುಬ್ಬಿ ಮತ್ತು ಶಿರಾ ತಾಲ್ಲೂಕಿನ 42 ಗ್ರಾಮಗಳ ಕುಡಿಯುವ ನೀರಿನ ಬೇಡಿಕೆಯನ್ನು ಹಾಗಲವಾಡಿ ಹೋಬಳಿ ಮಂಚಲದೊರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಠದಹಳ್ಳ ಮತ್ತು ಇತರೆ ಕೆರೆಗಳಿಗೆ ನೀರು ಪೂರೈಸುವ ಯೋಜನೆಯ ರೂ.25.65 ಕೋಟಿ (ರೂಪಾಯಿ ಇಪ್ಪತ್ತೈದು ಕೋಟಿ ಅರವತ್ತೈದು ಲಕ್ಷಗಳು ಮಾತ್ರ) ಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 50 ಆಕೋ-1/2019, ದಿನಾಂಕ:07-03-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
08/03/19

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2),
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು.

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ನಾಲಾ ವಲಯ, ತುಮಕೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.